ಆವರು ಪ್ರಭಾರದಲ್ಲಿದ್ದು ಬಿ. ಪಿ. ಟಿ. ಕಾಯ್ದೆ ಅನ್ವಯ ಬರುವ ಮೆಲ್ಮನವಿ, ರಿವಿಜನ್ ಹಾಗೂ ಇತರ ನ್ಯಾಯಾಂಗ ವಿಚಾರಣ ಹೊರತುಪಡಿಸಿ ದಿನ ನಿತ್ಯದ ಆಡಳಿತ, ಕಛೇರಿ ಕಾರ್ಯಗಳನ್ನು ನಿರ್ವಹಿಸುತ್ತಾರೆ.

ಈ) ಹೌದು. ಜನರ ಹಿತದೃಷ್ಟಿಯಿಂದ ಸಹಾಯಕ ಚಾರೀಟಿ ಕಮೀಷನರ್ ಆವರಿಗೆ ಚೆಕ್ ಸಹಿ ಮಾಡುವ ಅಧಿಕಾರವನ್ನು ನೀಡಲಾಗಿದೆ. ದಿನಾಂಕ ೮-೧೯೨೨ರಿಂದ ಚೆಕ್‌ಗಳಿಗೆ ಸಹಿ ಮಾಡುತ್ತಿದ್ದಾರೆ.

ಗದ್ದಿ ಗೌಡರ ಸಮಿತಿ ಪ್ರಕಾರ ಕಿತ್ತೂರು ತಾಲ್ಲೂಕ ಕೇಂದ್ರವನ್ನಾಗಿ ಮಾಡುವ ಬಗ್ಗೆ.

೧೨೪೭(೨೧೪೮)ಶ್ರೀ ಶಿವಾನಂದ ಹೆಚ್ ಕೌಜಲಗಿ (ಬೈಲಹೊಂಗಲ):- ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ:-

ಅ) ಗದ್ದಿ ಗೌಡರ ಸಮಿತಿ ಪ್ರಕಾರ ಬೆಳಗಾವಿ ಜಿಲ್ಲೆಯ ಕಿತ್ತೂರ ಗ್ರಾಮವನ್ನು ತಾಲ್ಲೂಕ ಕೇಂದ್ರವನ್ನಾಗಿ ಮಾಡಬೇಕೆಂದು ಶಿಫಾರಸ್ಸು ಮಾಡಿರುವುದು ನಿಜವೇ;

ಆ) ಹಾಗಿದ್ದಲ್ಲಿ, ಕಿತ್ತೂರನ್ನು ತಾಲ್ಲೂಕ ಕೇಂದ್ರವನ್ನಾಗಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಇ) ಸರ್ಕಾರವು ಗದ್ದಿ ಗೌಡರ ಸಮಿತಿ ಶಿಫಾರಸ್ಸನ್ನು ಒಪ್ಪಿಕೊಂಡಿದೆಯೇ ಮತ್ತು ಈ ಸಮಿತಿ ಸಲಹೆಗಳನ್ನು ಜಾರಿಗೆ ತರಲಾಗುವುದೇ?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಕಂದಾಯ ಸಚಿವರು):-

ಅ) ಕಿತ್ತೂರನ್ನು ತಾಲ್ಲೂಕವಾಗಿ ಮಾಡಬೇಕೆಂದು ಶಿಫಾರಸ್ಸು ಮಾಡಿರುವುದು ನಿಜ.

ಆ) ಪರಿಶೀಲಿಸಿ ಅಗತ್ಯವೆಂದು ಕಂಡುಬಂದಲ್ಲಿ ಕ್ರಮ ತೆಗೆದುಕೊಳ್ಳಲಾಗುವುದು.

ಇ) ಕೂಲಂಕುಷ ಪರಿಶೀಲನೆಯ ನಂತರ.

ರಾಜ್ಯದಲ್ಲಿರುವ ಗ್ರಾಮ ಲೆಕ್ಕಿಗರ ಕೊರತೆ

೧೨೪೮(೧೬೪೬)ಶ್ರೀ ಎಲ್. ಆರ್. ಶಿವರಾಮೇಗೌಡ (ನಾಗಮಂಗಲ):- ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ:-

ಅ) ರಾಜ್ಯದಲ್ಲಿರುವ ಗ್ರಾಮಲೆಕ್ಕಿಗರ ಕೊರತೆ ಎಷ್ಟು;

ಆ) ಮಂಡ್ಯ ಜಿಲ್ಲೆಯಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳ ಸಂಖ್ಯೆ ಎಷ್ಟು;

ಇ) ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಕಂದಾಯ ಸಚಿವರು):-

ಅ) ೨೦೩೪

ಆ) ೭೮

ಇ) ಕಾಲಕಾಲಕ್ಕೆ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.